<u>**ಕರ್ನಾಟಕ ವಿಧಾನ ಪರಿಷತ್ತು**</u>

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 84(916) |
| ಸದಸ್ಯರ ಹೆಸರು | : | ಶ್ರೀ ಶರವಣ ಟಿ.ಎ. (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 19.08.2025 |
| ಉತ್ತರಿಸಬೇಕಾದವರು | : | ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೆ.ಟಿ.ಸಿ.ಪಿ. 1961 ರ ಕಲಂ 4(k) ರಂತೆ ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರ ಕಚೇರಿಗೆ ನಗರ ಯೋಜನೆಯಲ್ಲಿ ಸ್ನಾತಕ ಅಥವಾ ಸ್ನಾತಕೋತ್ತರ ಪದವಿ ಪಡೆದಿರುವ ಸಹಾಯಕ ನಿರ್ದೇಶಕರ ದರ್ಜೆಗಿಂತ ಕಡಿಮೆ ಇರದ ಅಧಿಕಾರಿಯನ್ನು ಸ್ಥಳ ನಿಯುಕ್ತಿಗೊಳಿಸಬೇಕಾಗಿದ್ದು ನಿಜವೇ; | ಕೆ.ಟಿ.ಸಿ.ಪಿ. ಕಾಯ್ದೆ1961 ರ ಕಲಂ 4(k) ರ ಉಪ ಕಲಂ (10)(b) ರಲ್ಲಿ ಈ ಕೆಳಕಂಡಂತೆ ಉದ್ಧರಿಸಿದೆ.<br><br>(b) The Director of Town and Country Planning or the officers authorized by him not below the rank of Assistant Director of Town Planning, who must be a holder of Bachelor's degree or Master's degree in Town Planning, may prepare village or settlement extension plans sought by the Central or the State Government departments or Board, authority or body constituted by or under any law and owned or controlled by the state or the Central Government as mandated for areas notified for any State or Central Government schemes, where local planning area is not declared".<br><br>ಅದರಂತೆ, ಸ್ಥಳೀಯ ಯೋಜನಾ ಪ್ರಾಧಿಕಾರಗಳನ್ನು ಘೋಷಿಸದೇ ಇರುವ ಕಚೇರಿಗಳಿಗೆ ನಗರ ಯೋಜನೆಯಲ್ಲಿ ಸ್ನಾತಕ ಅಥವಾ ಸ್ನಾತಕೋತ್ತರ ಪದವಿ ಪಡೆದಿರುವ ಸಹಾಯಕ ನಿರ್ದೇಶಕರ ದರ್ಜೆಗಿಂತ ಕಡಿಮೆ ಇರದ ಅಧಿಕಾರಿಯನ್ನು ಮೇಲ್ಕಂಡ ಕಾಯ್ದೆಯಲ್ಲಿ ನಿರ್ದಿಷ್ಟಪಡಿಸಿರುವ ಕೆಲಸಗಳನ್ನು ನಿರ್ವಹಿಸಲು ಅಂದರೆ **To prepare village or settlement extension plans sought by the Central or the State Government departments or Board, authority or body constituted by or under any law and owned or controlled by the state or the Central Government** ಉದ್ದೇಶಕ್ಕೆ ಪ್ರಾಧಿಕರಿಸಬೇಕಾಗಿರುತ್ತದೆ. |
| ಆ) | ಸರ್ಕಾರದ ಅಧಿಸೂಚನೆ ಸಂ: ನಅಇ 26 ನಯೋಸೇ 2022, ದಿ:11-04-2022 ರಲ್ಲಿ ಮುಂಬಡ್ತಿ ನೀಡಿರುವ ಕೆಲವು ಅಧಿಕಾರಿಗಳನ್ನು ಕೆ.ಟಿ.ಸಿ.ಪಿ. ಕಾಯ್ದೆ 1961 ರ ಕಲಂ 4(ಐ), (ಕೆ) ರಂತೆ ನಿರ್ದಿಷ್ಟಪಡಿಸಿರುವ ಹುದ್ದೆಗಳಿಗೆ ನಿಯೋಜಿಸಲು ಸ್ಥಳ ನಿಯುಕ್ತಿಗೊಳಿಸಲು | ಪ್ರಸ್ತುತ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ಸಹಾಯಕ ನಿರ್ದೇಶಕರ ವೃಂದದಲ್ಲಿ 170 ಹುದ್ದೆಗಳು ಮಂಜೂರಾಗಿದ್ದು, ಅವುಗಳಲ್ಲಿ 130 ಹುದ್ದೆಗಳು ಭರ್ತಿಯಾಗಿದ್ದು, 40 ಹುದ್ದೆಗಳು ಖಾಲಿ ಇರುತ್ತವೆ.<br><br>ಖಾಲಿ ಹುದ್ದೆಗಳ ಪೈಕಿ 07 ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡಲು ಆರ್ಥಿಕ ಇಲಾಖೆಯು ಅನುಮೋದನೆ ನೀಡಿರುತ್ತದೆ. |

| | | |
|---|---|---|
| | ಅವಕಾಶವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಪ್ರಸ್ತುತ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಿಂದ 24 ಖಾಲಿ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡಲು ಪ್ರಸ್ತಾವನೆ ಸ್ವೀಕೃತವಾಗಿರುತ್ತದೆ. |
| ಇ) | ರಾಜ್ಯದ ಹಲವಾರು ಜಿಲ್ಲೆಗಳಲ್ಲಿ ಸಹಾಯಕ ನಿರ್ದೇಶಕರ ದರ್ಜೆಗಿಂತ ಕೆಳಹಂತದ ಅಧಿಕಾರಿಗಳಾದ ನಗರ ಯೋಜಕರುಗಳನ್ನು ಪ್ರಭಾರದಲ್ಲಿರಿಸಿರುವುದು ಹಾಗೂ ನಗರ ಯೋಜನೆಯಲ್ಲಿ ಸ್ನಾತಕ ಪದವಿ ಅಥವಾ ಸ್ನಾತಕೋತ್ತರ ಪದವಿ ವಿದ್ಯಾರ್ಹತೆ ಹೊಂದಿಲ್ಲದ ಅಧಿಕಾರಿಗಳನ್ನು ತಾತ್ಕಾಲಿಕ ವ್ಯವಸ್ಥೆ ಎಂಬ ಷರತ್ತು ವಿಧಿಸಿ ಅರ್ಹ ಅಧಿಕಾರಿಗಳು ಲಭ್ಯವಿದ್ದಾಗಲೂ ಸಹ ನಿಯಮಬಾಹಿರ ವರ್ಗಾವಣೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಸುತ್ತೋಲೆ ಸಂಖ್ಯೆ: ಸಿಆಸುಇ 388 ಸೇನೆನಿ 2024, ದಿನಾಂಕ 11.04.2025 ರಲ್ಲಿ "ದಿನಾಂಕ:28.10.2024 ರಿಂದಲೇ ಅನ್ವಯವಾಗುವಂತೆ ನೇರ ನೇಮಕಾತಿಗಾಗಿ ಅಥವಾ ಬ್ಯಾಕ್ ಲಾಗ್ ಹುದ್ದೆಗಳ ಭರ್ತಿಗಾಗಿ ಯಾವುದೇ ಹೊಸ ಅಧಿಸೂಚನೆಗಳನ್ನು ಹೊರಡಿಸಿದ್ದಲ್ಲಿ ಈ ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಲು ಸೂಚಿಸಿರುತ್ತದೆ".<br><br>ಅದರಂತೆ, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಿಂದ ಪ್ರಸ್ತಾಪಿಸಿರುವ ನೇರ ನೇಮಕಾತಿ ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ತಡೆಹಿಡಿಯಲಾಗಿರುತ್ತದೆ. |
| ಈ) | ಬಂದಿದ್ದಲ್ಲಿ ಈ ರೀತಿಯಾಗಿ ಕಾಯ್ದೆ ಉಲ್ಲಂಘಿಸಿ ವರ್ಗಾವಣೆ / ಸ್ಥಳ ನಿಯುಕ್ತಿ / ಪ್ರಭಾರ ವ್ಯವಸ್ಥೆ ಕಲ್ಪಿಸಲಾದ ಅಧಿಕಾರಿಗಳ ವಿರುದ್ಧ ಕೈಗೊಂಡ ಕ್ರಮಗಳೇನು ಹಾಗೂ ಈ ರೀತಿಯ ಕಾನೂನು ಬಾಹಿರ ಕ್ರಮಗಳನ್ನು ತಡೆಗಟ್ಟಲು ಕೈಗೊಂಡಿರುವ ಕ್ರಮಗಳಾವುವು? (ಸಂಪೂರ್ಣ ವಿವರ ನೀಡುವುದು) | ಆದ್ದರಿಂದ, ಆಡಳಿತಾತ್ಮಕ ಮತ್ತು ಸಾರ್ವಜನಿಕ ಕೆಲಸ ಕಾರ್ಯಗಳ ಹಿತದೃಷ್ಟಿಯಿಂದ, ಪ್ರಸ್ತುತ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯಲ್ಲಿ ಖಾಲಿ ಇರುವ ಸಹಾಯಕ ನಿರ್ದೇಶಕರ ಹುದ್ದೆಗಳಿಗೆ ಇಲಾಖೆಯಲ್ಲಿ ಲಭ್ಯವಿರುವ ಅಧಿಕಾರಿಗಳ ಸೇವೆಯನ್ನು ಬಳಸಿಕೊಂಡು ಅರ್ಹ ಅಧಿಕಾರಿಗಳು ಲಭ್ಯವಾಗುವವರೆಗೆ ತಾತ್ಕಾಲಿಕ ವ್ಯವಸ್ಥೆ ಎಂಬ ಷರತ್ತು ವಿಧಿಸಿ ಪ್ರಭಾರ ವ್ಯವಸ್ಥೆ ಹಾಗೂ ಸ್ಥಳನಿಯುಕ್ತಿ ಆದೇಶಗಳನ್ನು ಹೊರಡಿಸಲಾಗುತ್ತಿದೆ. |

ನಅಇ 209 ನಯೋಸೇ 2025(ಇ)

**(ಬಿ.ಎಸ್. ಸುರೇಶ)**
ನಗರಾಭಿವೃದ್ಧಿ ಮತ್ತು ನಗರ
ಯೋಜನೆ ಸಚಿವರು